**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 1409/2023**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ಧ**

**ಆರೋಪಿ/ತರು:**

1. ಉಮೇಶ ಬಿನ್ ಮಲ್ಲೇಗೌಡ
2. ನಾಗರಾಜ ಬಿನ್ ಮಲ್ಲೇಗೌಡ
3. ಮಮತ ಕೋಂ ಉಮೇಶ
4. ರುಕ್ಮಿಣಿ ಕೋಂ ನಾಗರಾಜು

**ಆಪಾದನೆ**

ಶ್ರೀಮತಿ ಕುಸುಮ ವಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಚನ್ನರಾಯಪಟ್ಟಣ ಆದ ನಾನು ಆರೋಪಿಯಾದ ನಿಮ್ಮ ವಿರುದ್ಧ ಕೆಳಕಂಡ ಆರೋಪಣೆ ಹೊರಿಸುವುದೇನೆಂದರೆ,

ದಿನಾಂಕ: 02.07.2023 ರಂದು ಸಂಜೆ 5.30 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಯಾಚೇನಹಳ್ಳಿ ಗ್ರಾಮದಲ್ಲಿ ಸಾಕ್ಷಿ.1 ರವರು ತಮ್ಮ ತೋಟಕ್ಕೆ ಹೋಗಲು ಇಟಾಚಿ ತೆಗೆದುಕೊಂಡು ಹೋಗುವಾಗ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಸಾಕ್ಷಿ.1 ರವರ ಜೊತೆ ಜಗಳ ತೆಗೆದು ಅವರು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2**) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ 1 ನೇ ಆರೋಪಿಯಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವಇಚ್ಛೆಯಿಂದ ಸಾಕ್ಷಿ.1 ವರ ಬೆನ್ನಿಗೆ ನಿಮ್ಮ ಕೈಗಳಿಂದ ಹೊಡೆದು, 3 ನೇ ಆರೋಪಿಯಾದ ನೀವು ಸಾಕ್ಷಿ.1 ರವರ ಬಲಗಣ್ಣಿನ ಕೆಳಕ್ಕೆ ನಿಮ್ಮ ಕೈಗಳಿಂದ ಹೊಡೆದು ನಂತರ 2 ನೇ ಆರೋಪಿಯಾದ ನೀವು ಸಾಕ್ಷಿ.1 ರವರ ಎದೆಗೆ ನಿಮ್ಮ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3**) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

1. ಮೇಲೆ ಓದಿ ಹೇಳಿದ ಆರೋಪವು ನಿಮಗೆ ಅರ್ಥವಾಯಿತೆ ?

    1 ನೇ ಆರೋಪಿಯ ಉತ್ತರಃ

    2 ನೇ ಆರೋಪಿಯ ಉತ್ತರಃ

    3 ನೇ ಆರೋಪಿಯ ಉತ್ತರಃ

    4 ನೇ ಆರೋಪಿಯ ಉತ್ತರಃ

2. ನೀವು ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ಪ್ರತಿರಕ್ಷಣೆ ಇದೆಯಾ ?

    1 ನೇ ಆರೋಪಿಯ ಉತ್ತರಃ

    2 ನೇ ಆರೋಪಿಯ ಉತ್ತರಃ

    3 ನೇ ಆರೋಪಿಯ ಉತ್ತರಃ

    4 ನೇ ಆರೋಪಿಯ ಉತ್ತರಃ

(ಸದರಿ ಆರೋಪವನ್ನು ಆರೋಪಿಗೆ ಓದಿ, ಹೇಳಿ, ಕೇಳಿ ಆರೋಪಿಯು ಕೊಟ್ಟ ಉತ್ತರವನ್ನು ಅವರ ಹೇಳಿಕೆಯಂತೆ ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ).

ದಿನಾಂಕಃ 19.07.2025

(ಶ್ರೀಮತಿ. ಕುಸುಮ ವಿ)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ. .